# <u>ಕರ್ನಾಟಕ ವಿಧಾನ ಪರಿಷತ್</u>

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 872

2) ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು),

3) ಉತ್ತರಿಸಬೇಕಾದ ದಿನಾಂಕ : 13.12.2023

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಮೀನು ಸಾಕಾಣಿಕೆ ಕೇಂದ್ರುಗಳ ಸಂಖ್ಯೆ ಎಷ್ಟು:ಅವು ಯಾವುವು (ವಿವರ ನೀಡುವುದು) | ಯಾದಗಿರಿ ಜಿಲ್ಲೆಯಲ್ಲಿ 01 ಮೀನುಸಾಕಾಣಿಕೆ ಕೇಂದ್ರುವಿದ್ದು, ವಿವರ ಈ ಕೆಳಗಿನಂತಿದೆ:<br>1) ಸರ್ಕಾರಿ ಮೀನುಮರಿ ಪಾಲನಾ ಕೇಂದ್ರು. ಹತ್ತಿಕುಣಿ<br>ಕಲಬುರಗಿ ಜಿಲ್ಲೆಯಲ್ಲಿ 01 ಮೀನುಸಾಕಾಣಿಕೆ ಕೇಂದ್ರುವಿದ್ದು,ವಿವರ ಈ ಕೆಳಗಿನಂತಿದೆ:<br>1) ತಾಲ್ಲೂಕು ನರ್ಸರಿ, ಚಂದ್ರುಂಪಲ್ಲಿ. |
| ಆ | ಮೀನುಗಾರಿಕೆಯನ್ನೇ ವೃತ್ತಿ ಮಾಡಿಕೊಂಡಿರುವ ಮೀನುಗಾರರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳು ಯಾವುವು: ಎಷ್ಟು ಫಲಾನುಭವಿಗಳಿಗೆ ಈ ಸೌಲಭ್ಯ ನೀಡಲಾಗಿದೆ: | ಮೀನುಗಾರಿಕೆಯನ್ನು ವೃತ್ತಿ ಮಾಡಿಕೊಂಡಿರುವ ಮೀನುಗಾರರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳ ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.<br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿವಧ ಯೋಜನೆಯಡಿ 2022-23 ಹಾಗೂ 2023-24ನೇ ಸಾಲಿನಲ್ಲಿ ಫಲಾನುಭವಿಗಳಿಗೆ ನೀಡಿರುವ ಸೌಲಭ್ಯದ ವಿವರಗಳನ್ನು ಅನುಬಂಧ-2 ರಲ್ಲಿ ನೀಡಲಾಗಿದೆ. |
| ಇ | ಮೀನು ಸಾಕಾಣಿಕೆ ಕೇಂದ್ರುಗಳಿಗೆ ಸರ್ಕಾರ ನೀಡುವ ಪ್ರೋತ್ಸಾಹ ದಾಯಕ ಯೋಜನೆಗಳು ಯಾವುವು ಇದಕ್ಕಾಗಿ ಸರ್ಕಾರ ಮೀಸಲಿಟ್ಟ ಅನುದಾನ ಎಷ್ಟು: | ಮೀನು ಸಾಕಾಣಿಕೆ ಕೇಂದ್ರುಗಳ ಸ್ಥಾಪನೆಗೆ ಸಂಬಂಧಿಸಿದಂತೆ, ಕೇಂದ್ರು ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ತಮ್ಮ ಸ್ವಂತ ಜಮೀನಿನಲ್ಲಿ ಮೀನುಸಾಕಣೆ ಮಾಡಲು ಸಹಾಯಧನ ನೀಡಲಾಗುವುದು. ಈ ಯೋಜನೆಡಯಡಿಯಲ್ಲಿ ಹೊಸ ಮೀನುಮರಿ ಪಾಲನಾ ಕೊಳಗಳ ನಿರ್ಮಾಣ, ಹೊಸ ಮೀನುಕೃಷಿಕೊಳಗಳ ನಿರ್ಮಾಣ, ರಿಸರ್ಕ್ಯುಲೇಟರಿ ಅಕ್ವಾಕಲ್ಚರ್ ಸಿಸ್ಟಂ (RAS), ಬಯೋಫ್ಲಾಕ್ ಮೀನು ಸಾಕಾಣಿಕೆ ಘಟಕಗಳನ್ನು ಸ್ಥಾಪಿಸಲು ಪ್ರೋತ್ಸಾಹ ನೀಡಲಾಗುವುದು. ಇದಕ್ಕಾಗಿ ಪ್ರತಿ ಘಟಕಕ್ಕೆ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ 40 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳೆಯರಿಗೆ ಶೇ 60 ರಷ್ಟು ಸಹಾಯಧನ ನೀಡಲಾಗುವುದು. ಯೋಜನಾ ವಿವರಗಳನ್ನು ಅನುಬಂಧ-3 ರಲ್ಲಿ ನೀಡಲಾಗಿದೆ. ಈ ಯೋಜನೆಗಳಿಗಾಗಿ ಸರ್ಕಾರ 2023-24 ನೇ ಸಾಲಿನಲ್ಲಿ ರೂ. 4463 ಲಕ್ಷ ಮೊತ್ತದ ಕ್ರಿಯಾ ಯೋಜನೆಗೆ ಕೇಂದ್ರು ಸರ್ಕಾರವು ಅನುಮೋದನೆ ನೀಡಿರುತ್ತದೆ. ಇದರಲ್ಲಿ ಕೇಂದ್ರುದ ಪಾಲು ರೂ.2677.8 ಲಕ್ಷ (60%) ಮತ್ತು ರಾಜ್ಯದ ಪಾಲು ರೂ.1785.2 ಲಕ್ಷ (40%) ಇರುತ್ತದೆ. |

| | | |
|---|---|---|
| ಈ | ಸರ್ಕಾರ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಸಾಕಾಣಿಕೆಯಿಂದ ಬರುವ ಅದಾಯ ಎಷ್ಟು? | 2022-23 ನೇ ಸಾಲಿಗೆ ಮೀನುಗಾರಿಕೆ ಇಲ್ಲಾಖೆಯ ವ್ಯಾಪ್ತಿಯ ಕಲಬುರಗಿ ಜಿಲ್ಲೆಯ 81 ಕೆರೆಗಳಲ್ಲಿ ಮೀನು ಸಾಕಾಣಿಕೆಯಿಂದ ರೂ. 46.77 ಲಕ್ಷಗಳ ಆದಾಯ ಬಂದಿರುತ್ತದೆ ಹಾಗೂ 2023-24ನೇ ಸಾಲಿಗೆ ಒಟ್ಟು 60 ಕೆರೆಗಳಲ್ಲಿ ಮೀನು ಸಾಕಾಣಿಕೆಯಿಂದ ನವೆಂಬರ್-2023ರ ಅಂತ್ಯದ ವರೆಗೆ ರೂ. 29.49 ಲಕ್ಷಗಳ ಆದಾಯ ಬಂದಿರುತ್ತದೆ.<br>ಯಾದಗಿರಿ ಜಿಲ್ಲೆಯ 2022-23ನೇ ಸಾಲಿನಲ್ಲಿ 74 ಕೆರೆಗಳ್ಲಲಿ ಮೀನು ಸಾಕಾಣಿಕೆಯಿಂದ ರೂ. 52.60 ಲಕ್ಷಗಳ ಆದಾಯ ಬಂದಿರುತ್ತದೆ ಹಾಗೂ 2023-24ನೇ ಸಾಲಿಗೆ ಒಟ್ಟು 74 ಕೆರೆಗಳಲ್ಲಿ ಮೀನು ಸಾಕಾಣಿಕೆಯಿಂದ ನವೆಂಬರ್-2023ರ ಅಂತ್ಯದ ವರೆಗೆ ರೂ. 38.29 ಲಕ್ಷಗಳ ಆದಾಯ ಬಂದಿರುತ್ತದೆ. |

ಸಂಖ್ಯೆ:ಪಸಂಮೀ ಇ-214ಮೀಇಯೋ2023

(ಮಂಕಾಳ ಎಸ್.ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

## ಅನುಬಂಧ-1

## 2023-24 ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ವಿವರ

1. **ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು :**

ಹಿಂದಿನ ಸಾಲಿನವರೆಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆಗಳಡಿ ಅನುಷ್ಠಾನಗೊಳಿಸಲಾಗುತ್ತಿದ್ದ 5 ಯೋಜನೆಗಳನ್ನು ಪ್ರಸಕ್ತ 2023-24 ನೇ ಸಾಲಿನಿಂದ ಒಂದೇ ಲೆಕ್ಕಶೀರ್ಷಿಕೆಯಡಿ (2405-00-101-0-03) ವಿಲೀನಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

1.1 **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟುಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್ ಗೆ ರೂ.2.50ಲಕ್ಷ ಸಹಾಯಧನ ನೀಡಲಾಗುತ್ತಿದೆ.

e. ಮೀನಿನ ಮರಿ ಉತ್ಪಾದನೆಯನ್ನು ಹೆಚ್ಚಿಸುವ ಒಂದು ತಂತ್ರವೆಂದರೆ ಮೀನು ಉತ್ಪಾದನೆ/ಸಾಕಣೆ ಕೇಂದ್ರಗಳಲ್ಲಿ ಸೌಲಭ್ಯಗಳ ಉನ್ನತೀಕರಣ (ಆಧುನೀಕರಣ) ಮೂಲಕ ಅಸ್ತಿತ್ವದಲ್ಲಿರುವ ಮೀನು ಸಾಕಣೆ ಸಾಮರ್ಥ್ಯದ ಬಳಕೆಯನ್ನು ಹೆಚ್ಚಿಸುವುದು. ಈ ನಿಟ್ಟಿನಲ್ಲಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕೈಗೊಳ್ಳಲಾಗುತ್ತಿದೆ.

1.2 **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ**

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್ಗ್ಲಾಸ್

ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗುತ್ತಿದೆ.

### 1.3 ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

### 1.4 ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುತ್ತಿದೆ.

### 1.5 ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ. ಪ್ರಸಕ್ತ 2023-24 ನೇ ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನುರೂ.50,000/-ಗಳಿಂದ ರೂ.3,00,000/- ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

### 2. PMMSY-ಪ್ರಧಾನ ಮಂತ್ರಿ ಮತ್ಸ್ಯಸಂಪದಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

### 3. ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ

ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

4. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

5. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟತೆರಿಗೆ ಮರುಪಾವತಿ**

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸೆಲ್ ಡೆಲಿವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ವಿತರಿಸಲಾಗುತ್ತಿದೆ.ಪ್ರಸ್ತುತ 2023-24 ನೇ ಸಾಲಿನಲ್ಲಿ ಮೀನುಗಾರರ ದೋಣಿಗಳಿಗೆ ನೀಡುತ್ತಿರುವ ಡೀಸೆಲ್ ಮಿತಿಯನ್ನು 1.5 ಲಕ್ಷ ಕಿಲೋಲೀಟರ್ನಿಂದ 2.00 ಲಕ್ಷ ಕಿಲೋ ಲೀಟರ್ ಗೆ ಹೆಚ್ಚಿಸಲಾಗಿದೆ.

6. **ಮತ್ಸ್ಯಾಶ್ರಯ ಯೋಜನೆ:**

ರಾಜ್ಯ ಸರ್ಕಾರವು 2006-07ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ"ಯನ್ನು ಪ್ರಾರಂಭಿಸಿದ್ದು, ಇದರ ಅಡಿಯಲ್ಲಿ ವಸತಿ ರಹಿತ ಮೀನುಗಾರರು ಅಥವಾ ವಾಸಿಸಲುಯೋಗ್ಯಮನೆ ಇಲ್ಲದ ಮೀನುಗಾರರಿಗೆ ಪ್ರತಿ ವರ್ಷ ಅನುದಾನ ಲಭ್ಯತೆಯ ಆಧಾರದ ಮೇಲೆ ಮನೆಗಳನ್ನು ಹಂಚಿಕೆಮಾಡಲಾಗುತ್ತದೆ.

2023-24ನೇಸಾಲಿನಲ್ಲಿಯಾವುದೇ ಮನೆಗಳು ಮಂಜೂರಾಗಿಲ್ಲ.

7. **ಮೀನುಗಾರರಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುತ್ತಿದೆ.

**ಆ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 80,000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ಹೈದರಾಬಾದ್ ನಲ್ಲಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗುತ್ತಿದೆ.

8. **ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕøತ ಮಾರ್ಗಸೂಚಿಗಳ ಪ್ರಕಾರಕೇಂದ್ರ ಸರ್ಕಾರವು ಪ್ರತಿಶತ50ರಷ್ಟು ಮತ್ತುರಾಜ್ಯ ಸರ್ಕಾರವು ಪ್ರತಿಶತ50ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

9. **ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುತ್ತಿದೆ.

10. **ಮೀನುಗಾರಿಕೆಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಅಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

11. ಕರ್ನಾಟಕ ರಾಜ್ಯದಲ್ಲಿ ಸುಮಾರು 10 ಲಕ್ಷ ಮೀನುಗಾರರಿದ್ದು, ಮೀನುಗಾರರು ಆರ್ಥಿಕವಾಗಿ ಹಿಂದುಳಿದವರಾಗಿರುತ್ತಾರೆ. ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಶಿಷ್ಯವೇತನ (Scholarship) ಯೋಜನೆ - "ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ಜಿಲ್ಲಾ ಪಂಚಾಯತ್ ಯೋಜನೆಗಳು**

1. **ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

2. **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ

ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆ.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/- ಗಳ ಸಹಾಯಧನವನ್ನು ನೀಡಲಾಗುತ್ತಿದೆ.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುತ್ತಿದೆ..

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4.ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ.

ಮೀನುಗಾರಿಕೆ ನಿರ್ದೇಶಕರು

<u>**ಅನುಬಂಧ-2**</u>

| ಜಿಲ್ಲೆ | ಫಲಾನುಭವಿಗಳ ವಿವರ |
|---|---|
| ಕಲಬುರುಗಿ | <u>**2022–23 ಮತ್ತು 2023-24 ನೇ ಸಾಲಿನ ಜಿಲ್ಲಾ ಹಾಗೂ ರಾಜ್ಯವಲಯ ಯೋಜನೆ**</u><br><br>1) ಜಿಲ್ಲಾ ವಲಯ ಹಾಗೂ ರಾಜ್ಯ ವಲಯ ಯೋಜನೆಗಳಡಿ ಮೀನುಗಾರಿಕೆಯನ್ನೇ ವೃತ್ತಿ ಮಾಡಿಕೊಂಡಿರುವ ಮೀನುಗಾರರಿಗೆ ಪರಿಶಿಷ್ಟ ಜಾತಿ ಮತ್ತು ಪ.ಪಂಗಡ ಯೋಜನೆಗಳಡಿ ತಲಾ ರೂ. 10,000/– ರಂತೆ,<br>• 2022–23ನೇ ಸಾಲಿಗೆ ಒಟ್ಟು 79 ಫಲಾನುಭವಿಗಳಿಗೆ ಸಹಾಯಧನವನ್ನು ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು ವಿತರಿಸಲಾಗಿದೆ.<br>• 2023–24ನೇ ಸಾಲಿನಲ್ಲಿ ಒಟ್ಟು 65 ಫಲಾನುಭವಿಗಳಿಗೆ ಸಲಕರಣೆ ಕಿಟ್ಟು ವಿತರಿಸಲಾಗಿದೆ.<br><br>2) ಜಿಲ್ಲಾ ವಲಯ ಯೋಜನೆಯಡಿ ಮೀನುಗಾರಿಕೆಯನ್ನೇ ವೃತ್ತಿ ಮಾಡಿಕೊಂಡಿರುವ ಮೀನುಗಾರರಿಗೆ ಮೀನುಮಾರಾಟ ಮಾಡಲು ದ್ವಿಚಕ್ರ ವಾಹನ ಖರೀದಿಸಲು ಶೇ.40% ರಂತೆ ತಲಾ ರೂ. 30000/– ರಂತೆ,<br>• 2022–23ನೇ ಸಾಲಿಗೆ ಒಟ್ಟು 05 ಫಲಾನುಭವಿಗಳಿಗೆ ಸಹಾಯಧನವನ್ನು ವಿತರಿಸಲಾಗಿದೆ.<br>• 2023–24ನೇ ಸಾಲಿನಲ್ಲಿ ಒಟ್ಟು 07 ಫಲಾನುಭವಿಗಳಿಗೆ ಸಲಕರಣೆ ಕಿಟ್ಟು ವಿತರಿಸಲಾಗಿದೆ<br>3) 2022–23ನೇ ಸಾಲಿಗೆ ರಾಜ್ಯ ವಲಯ ಮೀನುಮರಿ ಖರೀದಿಗೆ ಸಹಾಯಧನ ಯೋಜನೆಯಡಿ ಮೀನುಗಾರರ ಸಹಕಾರ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ. 20000/– ಹಾಗೂ 10.00 ಲಕ್ಷ ಫ್ರೈಸಾಂದ್ರತೆಯಂತೆ ಖರೀದಿಸಿದ ಮೀನುಮರಿಗಳ ಮೌಲ್ಯದ ಶೇ. 50% ರಷ್ಟು ಗರಿಷ್ಠ 25000/–ಗಳ ಸಹಾಯಧನವನ್ನು ಒಂದು ಮೀನುಗಾರರ ಸಹಕಾರ ಸಂಘ ಹಾಗೂ 09 ಮೀನು ಮರಿ ಸಾಕಾಣಿಕೆ ಕೇಂದ್ರಗಳಿಗೆ ಒಟ್ಟು 2,22,500/–ಲಕ್ಷಗಳ ಸಹಾಯಧನವನ್ನು ವಿತರಿಸಲಾಗಿದೆ.<br>• 2023–24ನೇ ಸಾಲಿನಲ್ಲಿ ಯಾವುದೇ ಪ್ರಗತಿ ಇರುವುದಿಲ್ಲ. |
| ಯಾದಗಿರಿ | <u>**2022–23ನೇ ಸಾಲಿನ ಜಿಲ್ಲಾ ಹಾಗೂ ರಾಜ್ಯವಲಯ ಯೋಜನೆ**</u><br>1) **ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯಧನ:–** 2022–23ನೇ ಸಾಲಿನ ಈ ಯೋಜನೆಯಲ್ಲಿ ಒಟ್ಟು ಅನುದಾನ ರೂ.14.00 ಲಕ್ಷ ಇದ್ದು, ಸದರಿ ಯೋಜನೆಯಡಿ ರೂ.7.00 ಲಕ್ಷ ಅನುದಾನವನ್ನು ವೇತನೇತರ ವೆಚ್ಚಕ್ಕಾಗಿ, 4 ಕಛೇರಿಗಳಿಗೆ ಅವಶ್ಯಕತೆ ಇರುವ ಹೊರಗುತ್ತಿಗೆಯ ಆಧಾರದ ಮೇಲೆ ಬಾಡಿಗೆ ವಾಹನದ ಬಾಡಿಗೆ ಪಾವತಿಸಲು, ಹಾಗೂ ಉಳಿಕೆಯಾದ ರೂ.7.00 ಲಕ್ಷ ಅನುದಾನದಲ್ಲಿ ಮುಂದುವರೆದು ರೂ.4.30 ಲಕ್ಷ ಅನುದಾನ ಪ.ಜಾತಿ ವಿಶೇಷ ಘಟಕ ಯೋಜನೆಯಡಿ ಮತ್ತು ರೂ.2.70 ಲಕ್ಷ ಅನುದಾನ ಪ.ಪಂಗಡ ಗಿರಿಜನ ಉಪ ಯೋಜನೆಯಡಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರ ಫಲಾನುಭವಿಗಳಿಗೆ ಒಂದು ಫಲಾನುಭವಿಗೆ ಗರಿಷ್ಟ ಶೇ 100% ರಷ್ಟು ರೋ 10000/–ಗಳ ಸಹಾಯಧನದಲ್ಲಿ ಮೀನುಗಾರಿಕೆ ಸಲಕರಣೆ ಗಳನ್ನು ವಿತರಣೆ ಮಾಡಲಾಗುವುದು. ವಿಶೇಷ ಘಟಕ ಯೋಜನೆಯಡಿ 43 ಜನ ಫಲಾನುಭವಿಗಳು |

ಹಾಗೂ ಗಿರಿಜನ ಉಪ ಯೋಜನೆಯಡಿ 30 ಜನ ಫಲಾನುಭವಿಗಳು ಸಹಾಯಧನ ನೀಡಲಾಗಿದೆ.

2) **ಮೀನುಮಾರುಕಟ್ಟೆ ನಿರ್ಮಾಣ ಹಾಗೂ ಮೀನುಮಾರಾಟಕ್ಕೆ ಸಹಾಯಧನ :-** ಈ ಯೋಜನೆಯಲ್ಲಿ ರೂ.3.00 ಲಕ್ಷ ಅನುದಾನ ನಿಗಧಿಪಡಿಸಲಾಗಿದ್ದು, ಸದರಿ ಯೋಜನೆಯಡಿ ಮೀನುಗಾರರು ಹಿಡಿದ ತಾಜಾ ಮೀನುಗಳನ್ನು ಮಾರಾಟ ಮಾಡಲು ದ್ವಿ ಚಕ್ರ ವಾಹನ ಮತ್ತು ಶಾಖನಿರೋಧಕ ಪೆಟ್ಟಿಗೆ ಖರೀದಿಸಿರುವುದಕ್ಕೆ ಒಟ್ಟು 10 ಜನ ಫಲಾನುಭವಿಗಳಿಗೆ ಘಟಕ ವೆಚ್ಚ ರೂ.75000/-ಕ್ಕೆ ಶೇ 40% ರಷ್ಟು ಗರಿಷ್ಠ ವ್ಯಕ್ತಿಗತ ರೂ. 30000=00 ಗಳ ಸಹಾಯಧನ ನೀಡಲಾಗಿದೆ.

3) **ಪ್ರದರ್ಶನ ಮತ್ತು ತರಬೇತಿ:-** 2022-23ನೇ ಸಾಲಿನ ಈ ಯೋಜನೆಯಡಿ ಒಟ್ಟು ರೂ.1.50 ಲಕ್ಷ ನಿಗಧಿಪಡಿಸಲಾಗಿದ್ದು, ಸದರಿ ಅನುದಾನದಲ್ಲಿ ಇಲಾಖೆ ಯೋಜನೆಗಳ ಬಗ್ಗೆ ಮೀನುಗಾರರು, ಮೀನುಕೃಷಿಕರು ಹಾಗೂ ಮೀನುಗಾರ ಮಹಿಳೆಯರಿಗೆ ಮೀನುಗಾರಿಕೆಯ ಬಗ್ಗೆ ವೈಜ್ಞಾನಿಕ ಮೀನುಕೃಷಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪ್ರಚಾರ ಪಡಿಸಲು ಜಿಲ್ಲೆಯ ಎಲ್ಲಾ ತಾಲೂಕು ಮಟ್ಟದಲ್ಲಿ ಪ್ರದರ್ಶನ ಮತ್ತು ತರಬೇತಿಗಳನ್ನು ನೀಡಲಾಗಿದೆ.

**ರಾಜ್ಯವಲಯ ಯೋಜನೆಗಳು:-**

1) **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ:-** 2022-23ನೇ ಸಾಲಿನ ಈ ಯೋಜನೆಯಲ್ಲಿ ರೂ.2.90 ಲಕ್ಷ ಅನುದಾನ ಲಭ್ಯವಿದ್ದು, ನದಿಭಾಗದಲ್ಲಿ ಪರವಾನಿಗೆ ಮೂಲಕ ಮೀನುಗಾರಿಕೆ ಮಾಡುತ್ತಿರುವ ಫಲಾನುಭವಿಗಳಿಗೆ ಮತ್ತು ಮೀನುಗಾರರ ಸಹಕಾರ ಸಂಘಗಳಿಗೆ ಪ್ರತಿ ಫಲಾನುಭವಿಗೆ ಶೇ 100% ರಷ್ಟು ಗರಿಷ್ಠ ರೂ.10,000 ರಂತೆ 29 ಜನ ಫಲಾನುಭವಿಗಳಿಗೆ ಇಲಾಖೆಯ ನಿಯಮಾನುಸಾರ ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು (ಬಲೆ, ದಾರ) ಖರೀದಿಸಿ ನೀಡಲಾಗಿದೆ.

2) **ಮೀನುಮರಿ ಖರೀದಿಗೆ ಸಹಾಯಧನ:-** 2022-23ನೇ ಸಾಲಿನ ಈ ಯೋಜನೆಯಡಿ ಇಲಾಖೆ ಮೀನುಮರಿ ಕೇಂದ್ರಗಳಿಂದ ಹಾಗೂ ಇಲಾಖೆಯಿಂದ ನೋಂದಾಯಿಸಲ್ಪಟ್ಟ ಮೀನುಮರಿ ಕೇಂದ್ರಗಳಿಂದ ಖರೀದಿಸಿದ ಮೀನುಮರಿಗಳ ವೆಚ್ಚಕ್ಕೆ ಶೇ 50% ರಂತೆ ವ್ಯಕ್ತಿಗತ ಗರಿಷ್ಠ ರೂ.5,000 ಹಾಗೂ ಮೀನುಗಾರರ ಸಹಕಾರ ಸಂಘಗಳಿಗೆ ರೂ.20,000 ಸಹಾಯಧನ ನೀಡಲಾಗುವುದು. ಸದರಿ ಯೋಜನೆಯಡಿ 07 ಜನ ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ.

3) **ಪ್ರಧಾನಮಂತ್ರಿ ಮತ್ಸ್ ಸಂಪದ ಯೋಜನೆ:-** ಈ ಯೋಜನೆಯಲ್ಲಿ ಮೀನುಕೃಷಿಕೊಳ ನಿರ್ಮಾಣಕ್ಕೆ ಶೇ 60% ರಂತೆ ಪ.ಜಾತಿ/ಪಂಗಡ ಹಾಗೂ ಮಹಿಳೆ ಫಲಾನುಭವಿಗಳಿಗೆ ಪ್ರತಿ ಹೆಕ್ಟೇರ್‌ಗೆ ರೂ.4.20 ಲಕ್ಷ ಸಹಾಯಧನ ಹಾಗೂ ಶೇ 40% ರಂತೆ ಸಾಮಾನ್ಯ ವರ್ಗದವರಿಗೆ ರೂ.2.80 ಲಕ್ಷ ಸಹಾಯಧನ ನೀಡಲಾಗುವುದು. ಮೇಲಿನ ಸಹಾಯಧನದಲ್ಲಿ ಕೇಂದ್ರದ ಪಾಲು ಶೇ60% ಮತ್ತು ರಾಜ್ಯದ ಪಾಲು ಶೇ. 40% ಇರುತ್ತದೆ. ಹಾಗೂ ಸದರಿ ಯೋಜನೆಯಡಿ ಶಾಖ ನಿರೋಧಖ ನಾಲ್ಕು ಚಕ್ರದ ವಾಹನ ಮತ್ತು ತ್ರಿಚಕ್ರ ವಾಹನ, ಶೀಥಲೀಕರಣ ಕೇಂದ್ರ, ಮಂಜುಗಡ್ಡೆ ಸ್ಥಾವರ ಇತ್ಯಾದಿಗಳಿಗೆ ಸಹಾಯಧನ ನೀಡಲಾಗುವುದು.

| | |
|---|---|
| | **<u>2023–24ನೇ ಸಾಲಿನ ಜಿಲ್ಲಾ ಹಾಗೂ ರಾಜ್ಯವಲಯ ಯೋಜನೆ</u>**<br>**<u>ಜಿಲ್ಲಾವಲಯ ಯೋಜನೆ:</u>**<br>**1)ವಿ.ಘ.ಯೋ:** ಅಡಿ 4.30 ಲಕ್ಷ ಗುರಿ ನಿಗಧಿಯಾಗಿದ್ದು, ಒಬ್ಬ ಫಲಾನುಭವಿಗೆ ಗರಿಷ್ಟ ಶೇ 100% ರಷ್ಟು ರೂ. 10000/-ಗಳ ಸಹಾಯಧನದಲ್ಲಿ ವಿಶೇಷ ಘಟಕ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು ವಿತರಣೆ ಮಾಡಲು ಒಟ್ಟು 43 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಸಹಾಯಧನ ನೀಡಲು ಪ್ರಗತಿಯ ಹಂತದಲ್ಲಿದೆ.<br><br>**2)ಗಿ.ಉ.ಯೋ:** ಅಡಿ 3.00 ಲಕ್ಷ ಗುರಿ ನಿಗಧಿಯಾಗಿದ್ದು, ಒಬ್ಬ ಫಲಾನುಭವಿಗೆ ಗರಿಷ್ಟ ಶೇ 100% ರಷ್ಟು ರೂ. 10000/-ಗಳ ಸಹಾಯಧನದಲ್ಲಿ ಗಿರಿಜನ ಉಪ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು ವಿತರಣೆ ಮಾಡಲು ಒಟ್ಟು 30 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಸಹಾಯಧನ ನೀಡಲು ಪ್ರಗತಿಯ ಹಂತದಲ್ಲಿದೆ.<br><br>**3)ಮತ್ಸ್ಯವಾಹಿನಿ:** ಈ ಯೋಜನೆಯಲ್ಲಿ ರೂ.3.00 ಲಕ್ಷ ಅನುದಾನ ನಿಗಧಿಪಡಿಸಲಾಗಿದ್ದು, ಸದರಿ ಯೋಜನೆಯಡಿ ಮೀನುಗಾರರು ಹಿಡಿದ ತಾಜಾ ಮೀನುಗಳನ್ನು ಮಾರಾಟ ಮಾಡಲು ದ್ವಿ ಚಕ್ರ ವಾಹನ ಮತ್ತು ಶಾಖನಿರೋಧಕ ಪೆಟ್ಟಿಗೆ ಖರೀದಿಸಿರುವುದಕ್ಕೆ ಒಟ್ಟು 09 ಜನ ಫಲಾನುಭವಿಗಳಿಗೆ ಘಟಕ ವೆಚ್ಚ ರೂ.75000/-ಕ್ಕೆ ಶೇ 40% ರಷ್ಟು ಗರಿಷ್ಠ ವ್ಯಕ್ತಿಗತ ರೂ. 30000=00 ಗಳ ಸಹಾಯಧನ ನೀಡಲು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಸಹಾಯಧನ ನೀಡಲು ಪ್ರಗತಿಯ ಹಂತದಲ್ಲಿದೆ.<br><br>**4)ಪ್ರದರ್ಶನ ಮತ್ತು ತರಬೇತಿ:** ಸದರಿ ಯೋಜನೆ ಅಡಿ 2.00 ಗುರಿ ನಿಗಧಿಯಾಗಿದ್ದು, ಮೀನುಕೃಷಿಕರ ದಿನಾಚರಣೆ ಹಾಗೂ ವಿಶ್ವ ಮೀನುಗಾರರ ದಿನಾಚರಣೆ-2023ರ ಅಂಗವಾಗಿ ನವೆಂಬರ್-2023ರ ಅಂತ್ಯದ ವರೆಗೆ 1.34 ಲಕ್ಷ ವೆಚ್ಚ ಮಾಡಲಾಗಿದೆ.<br><br><u>ರಾಜ್ಯವಲಯ ಯೋಜನೆಗಳು:-</u><br><br>**1)ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ:-** ಸದರಿ ಯೋಜನೆ ಅಡಿ 1.20 ಲಕ್ಷ ಗುರಿ ನಿಗಧಿಯಾಗಿದ್ದು, ಫಲಾನುಭವಿಗಳ ಆಯ್ಕೆಮಾಡಲಾಗಿದ್ದು ಮೇಲಾಧಿಕಾರಿಗಳ ಅನುಮೋದನೆ ಮತ್ತು ಮಂಜೂರಾತಿಗಾಗಿ ಸಹಾಯಧನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br>**2)ಮೀನುಮರಿ ಖರೀದಿಗೆ ಸಹಾಯಧನ:-**ಸದರಿ ಯೋಜನೆ ಅಡಿ 0.40 ಗುರಿ ನಿಗಧಿಯಾಗಿದ್ದು, ಫಲಾನುಭವಿಗಳ ಆಯ್ಕೆ ಪ್ರಗತಿಯಲ್ಲಿದೆ. |

ಮೀನುಗಾರಿಕೆ ನಿರ್ದೇಶಕರು

# ಅನುಬಂಧ-3

## ಪಿ. ಎಂ.ಎಂ ಎಸ್ ವೈ. ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿರುವ ಉಪಯೋಜನೆಗಳು

| ಕ್ರ. ಸಂ | ಚಟುವಟಿಕೆಗಳು | ಘಟಕ | ಘಟಕ ವೆಚ್ಚ (ರೂ. ಲಕ್ಷಗಳಲ್ಲಿ) |
|---|---|---|---|
| 1 | ಸಿಹಿ ನೀರು ಮೀನುಗಳ ಹ್ಯಾಚರಿ ಕೇಂದ್ರಗಳ ಸ್ಥಾಪನೆ | (ಸಂಖ್ಯೆ) | 25 |
| 2 | ಹೊಸ ಸಿಹಿ ನೀರು ಸೀಗಡಿ ಹ್ಯಾಚರಿ ಕೇಂದ್ರಗಳ ಸ್ಥಾಪನೆ | (ಸಂಖ್ಯೆ) | 50 |
| 3 | ಹೊಸ ಪಾಲನೆ ಕೊಳಗಳ ನಿರ್ಮಾಣ | (ಹೆ) | 7 |
| 4 | ಹೊಸ ಮೀನು ಕೃಷಿ ಕೊಳಗಳ ನಿರ್ಮಾಣ | (ಹೆ) | 7 |
| 5 | ಸಮಗ್ರ ಮೀನುಕೃಷಿ, ಸ್ಕ್ಯಾಂಪಿ, ಪಂಗಾಸಿಯಸ್, ತಿಲಾಪಿಯಾ ಸೇರಿದಂತೆ ಸಿಹಿ ನೀರಿನ ಜಲಕೃಷಿಗೆ ಹೂಡಿಕೆ ವೆಚ್ಚಗಳು | (ಹೆ) | 4 |
| 6 | ಅಗತ್ಯಕ್ಕೆ ಅನುಗುವಾಗಿ ಹೊಸ ಹಿನ್ನೀರುಹ್ಯಾಚರಿ ಕೇಂದ್ರಗಳ ಸ್ಥಾಪನೆ | (ಸಂಖ್ಯೆ) | 50 |
| 7 | ಹಿನ್ನೀರು ಪ್ರದೇಶದಲ್ಲಿ ಜಲಚರ ಸಾಕಣೆಗಾಗಿ ಹೊಸ ಕೊಳ ನಿರ್ಮಾಣ | (ಹೆ) | 8 |
| 8 | ಲವಣ/ಕ್ಷಾರಿಯ ಪ್ರದೇಶದಲ್ಲಿ ಹೊಸ ಕೊಳ ನಿರ್ಮಾಣ | (ಹೆ) | 8 |
| 9 | ಹಿನ್ನೀರು ಪ್ರದೇಶಗಳಲ್ಲಿ ಜಲಕೃಷಿಗೆ ಹೂಡಿಕೆ ವೆಚ್ಚ | (ಹೆ) | 6 |
| 10 | ಲವಣ/ಕ್ಷಾರಿಯ ಪ್ರದೇಶಗಳಲ್ಲಿ ಜಲಕೃಷಿಗೆ ಹೂಡಿಕೆ ವೆಚ್ಚ | (ಹೆ) | 6 |
| 11 | ಹಿನ್ನೀರು/ಲವಣ/ಕ್ಷಾರಿಯ ಪ್ರದೇಶದಲ್ಲಿ ಬಯೊಪ್ಲಾಕ್ ಕೊಳಗಳ ನಿರ್ಮಾಣ ಹೂಡಿಕೆ ವೆಚ್ಚಗಳು ಒಳಗೊಂಡಂತೆ | (ಸಂಖ್ಯೆ) | 18 |
| 12 | ಸಿಹಿ ನೀರಿನ ಪ್ರದೇಶದಲ್ಲಿ ಬಯೊಪ್ಲಾಕ್ ಕೊಳಗಳ ನಿರ್ಮಾಣ ಹೂಡಿಕೆ ವೆಚ್ಚಗಳು ಒಳಗೊಂಡಂತೆ | (ಸಂಖ್ಯೆ) | 14 |
| 13 | ಜಾಲಾಶಯದಲ್ಲಿ ಬಲಿತ ಮೀನುಮರಿ ದಾಸ್ತನು@1000 ಬಲಿತ ಮೀನುಮರಿ/(ಹೇ) ರೂ3.0 ಲಕ್ಷ/ ಲಕ್ಷ ಮೀನುಮರಿ | (ಸಂಖ್ಯೆ) | 3 |
| 14 | ಜಲಾವೃತ ಪ್ರದೇಶದಲ್ಲಿ ಮೀನುಮರಿ ದಾಸ್ತನು@1000 ಮೀನುಮರಿ/ಹೇ ರೂ3.0 ಲಕ್ಷ/ ಲಕ್ಷ ಮೀನುಮರಿ | (ಹೆ) | |
| 15 | ಕಡಲ ಮೀನು ಸಣ್ಣಮೀನುಗಳ ಹ್ಯಾಚರಿ ಕೇಂದ್ರಗಳ ಸ್ಥಾಪನೆ | (ಸಂಖ್ಯೆ) | 50 |
| 16 | ಕಡಲ ಮೀನು ದೊಡ್ಡ ಮೀನುಗಳ ಹ್ಯಾಚರಿ ಕೇಂದ್ರಗಳ ಸ್ಥಾಪನೆ | (ಸಂಖ್ಯೆ) | 250 |
| 17 | ಕಡಲ ಮೀನು ನರ್ಸರಿಗಳು | (ಸಂಖ್ಯೆ) | 15 |
| 18 | ತೆರೆದ ಸಮುದ್ರಲ್ಲಿ ಪಂಜರಗಳ ಸ್ಥಾಪನೆ (100-120 ಕ್ಯೂ ಮೀ) | (ಸಂಖ್ಯೆ) | 5 |
| 19 | ಹೂಡಿಕೆ ವೆಚ್ಚ(ಪ್ರತಿ ರಾಫ್ಟ್‌ಗೆ)ಸೇರಿದಂತೆ ಕಡಲ ಕಳೆ ಕೃಷಿಗೆ ರಾಫ್ಟ್‌ಗಳ ಸ್ಥಾಪನೆ | (ಸಂಖ್ಯೆ) | 0.015 |

| ಕ್ರ. ಸಂ | ಚಟುವಟಿಕೆಗಳು | ಘಟಕ | ಘಟಕ ವೆಚ್ಚ |
|---|---|---|---|
| 20 | ಹೂಡಿಕೆ ವೆಚ್ಚ ಒಳಗೊಂಡಂತೆ ಮೊನೊಲಿನ್/ ಟ್ಯೂಬೆನೆಟ್ ವಿಧಾನದೊಂದಿಗೆ ಕಡಲಕಳೆ ಕೃಷಿ ಸ್ಥಾಪನೆ | (ಸಂಖ್ಯೆ) | 0.08 |
| 21 | ಕಡಲ ಚಿಪ್ಪುಕೃಷಿ | (ಸಂಖ್ಯೆ) | 0.2 |
| 22 | ಹಿತ್ತಲಿನಲ್ಲಿ ಅಲಂಕಾರಿಕ ಮೀನು ಸಾಕಣಿಕೆ ಘಟಕ | (ಸಂಖ್ಯೆ) | 3 |
| 23 | ಮದ್ಯಮ ಪ್ರಮಾಣದ ಅಲಂಕಾರಿಕ ಮೀನು ಸಾಕಣಿಕೆ ಘಟಕ | (ಸಂಖ್ಯೆ) | 8 |
| 24 | ಸಮಗ್ರ ಅಲಂಕಾರಿಕ ಮೀನು ಘಟಕ (ಸಿಹಿನೀರು) | (ಸಂಖ್ಯೆ) | 25 |
| 25 | ಸಮಗ್ರ ಅಲಂಕಾರಿಕ ಮೀನು ಘಟಕ (ಸಮುದ್ರ ನೀರಿನ) | (ಸಂಖ್ಯೆ) | 30 |
| 26 | ಸಿಹಿನೀರಿನ ಅಲಂಕಾರಿಕ ತಾಯಿ ಮೀನುಗಳ ಬ್ರೂಡ್ ಬ್ಯಾಂಕ್ ಸ್ಥಾಪನೆ | (ಸಂಖ್ಯೆ) | 100 |
| 27 | ಕ್ರೀಡಾ ಮೀನುಗಾರಿಕೆಗೆ ಉತ್ತೇಜನ | (ಸಂಖ್ಯೆ) | 50 |
| 28 | ದೊಡ್ಡ ಅರ್ ಎ ಎಸ್/ಬಯೋಪ್ಲಾಕ್ ಘಟಕ | (ಸಂಖ್ಯೆ) | 50 |
| 29 | ಮದ್ಯಮ ಅರ್ ಎ ಎಸ್/ಬಯೋಪ್ಲಾಕ್ ಘಟಕ | (ಸಂಖ್ಯೆ) | 25 |
| 30 | ಸಣ್ಣ ಅರ್ ಎ ಎಸ್/ಬಯೋಪ್ಲಾಕ್ ಘಟಕ | (ಸಂಖ್ಯೆ) | 7.5 |
| 31 | ಹಿತ್ತಲಿನ ಅರ್ ಎ ಎಸ್ ಘಟಕ ಸ್ಥಾಪನೆ | (ಸಂಖ್ಯೆ) | 0.5 |
| 32 | ಜಾಲಾಶಯದಲ್ಲಿ ಪಂಜರಗಳ ಸ್ಥಾಪನೆ | (ಸಂಖ್ಯೆ) | 3 |
| 33 | ತೆರೆದ ಜಲ ಸಂಪನ್ಮೂಲಗಳಲ್ಲಿ ದೊಡ್ಡಿಗಳಲ್ಲಿ ಮೀನುಕೃಷಿ | (ಹೆ) | 3 |

ಮೀನುಗಾರಿಕೆ ನಿರ್ದೇಶಕರು